**Bangalore**
**Regional News**
**14.03.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ಕೇಂದ್ರದಿಂದ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ : ವಿಶೇಷ ಚೇತನ ಕ್ರೀಡಾಪಟುಗಳಿಗೆ ಉತ್ತೇಜನಾಕಾರಿ ಕಾರ್ಯಕ್ರಮ - ಸಚಿವ ಮನ್ಸುಖ್ ಮಾಂಡವೀಯ

2. ರಾಜ್ಯದಲ್ಲಿ ಅಡುಗೆ ಅನಿಲ ಅಭಾವವಾಗದಂತೆ ಗಮನ ಹರಿಸುವುದು ಕೇಂದ್ರದ ಜವಾಬ್ದಾರಿ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

3. ಇದೇ ೨೩ ರಿಂದ ಏಪ್ರಿಲ್ ೪ರವರೆಗೆ ವಿಶ್ವ ವಿಖ್ಯಾತ ಮೇಲುಕೋಟೆ ವೈರಮುಡಿ ಬ್ರಹ್ಮೋತ್ಸವ : ಅಗತ್ಯ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ

4. ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಅಭಯಾರಣ್ಯದಲ್ಲಿ ಕಾಡ್ಗಿಚ್ಚು : ಅಪಾರ ಪ್ರಮಾಣದಲ್ಲಿ ಅರಣ್ಯ ನಾಶ

<><><><>

ಕಳೆದ ೧೧ ವರ್ಷದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಖೇಲೋ ಇಂಡಿಯಾ ಹೆಸರಿನಡಿ ಕ್ರೀಡೆ ಹೆಚ್ಚಿನ ಪ್ರೋತ್ಸಾಹ ನೀಡಿದೆ. ದೇಶದ ಪ್ರತಿ ಗ್ರಾಮ, ಪ್ರತಿ ಪಟ್ಟಣ ಹಾಗೂ ಪ್ರತಿ ಶಾಲೆಗೂ ಕ್ರೀಡೆಯನ್ನು ಕೊಂಡೊಯ್ದಿರುವುದು ಸರ್ಕಾರದ ಸಾಧನೆಯಾಗಿದೆ ಎಂದು ಕೇಂದ್ರ ಯುವಜನಸೇವೆ ಮತ್ತು ಕ್ರೀಡಾ ಸಚಿವ ಮನ್ಸುಕ್ ಮಾಂಡವೀಯ ಹೇಳಿದ್ದಾರೆ. ಮಂಡ್ಯ ತಾಲ್ಲೂಕಿನ ವಿ.ಸಿ.ಫಾರಂನ ಕೃಷಿ ವಿಶ್ವವಿದ್ಯಾನಿಲಯದ ಆವರಣದಲ್ಲಿ ಒಂದೂವರೆ ಎಕರೆ ಜಾಗದಲ್ಲಿ ೧೪ ಕೋಟಿ ರೂಪಾಯಿ ವೆಚ್ಚದ ಸುಸಜ್ಜಿತ ಬಹುಪಯೋಗಿ ನೂತನ ಕ್ರೀಡಾಂಗಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಸಚಿವರು, ದೇಶದ ಅನೇಕ ಕ್ರೀಡಾಂಗಣವನ್ನು ಉನ್ನತೀಕರಿಸಿದೆ ಎಂದರು.

ಧ್ವನಿ: ಮನ್ಸುಖ್ ಮಾಂಡವೀಯ (೨೬ ಸೆಕೆಂಡ್‌ಗಳು)

ದೇಶದಲ್ಲಿ ಕ್ರೀಡೆ ಮತ್ತು ಕ್ರೀಡಾಪಟುಗಳಿಗೆ ಹೆಚ್ಚಿನ ಉತ್ತೇಜನ ನೀಡುತ್ತಿರುವುದಲ್ಲದೆ, ವಿಶೇಷಚೇತನ ಕ್ರೀಡಾಪಟುಗಳಿಗೆ ಹಲವು ಪ್ರೋತ್ಸಾಹಗಳನ್ನು ನೀಡಿ, ವಿಶೇಷ ಅನುದಾನವನ್ನು ಮೀಸಲಿಟ್ಟಿದೆ. ಬಜೆಟ್‌ನಲ್ಲೂ ಕ್ರೀಡೆಗೆ ಪ್ರೋತ್ಸಾಹ ನೀಡಲಾಗಿದೆ. ಇದು ದೇಶದ ಕ್ರೀಡೆಗೆ ಪ್ರಧಾನಿ ನರೇಂದ್ರ ಮೋದಿಯವರ ಕೊಡುಗೆ ಎಂದು ಹರ್ಷ ವ್ಯಕ್ತಪಡಿಸಿದರು.

ಧ್ವನಿ: ಮನ್ಸುಖ್ ಮಾಂಡವೀಯ (೩೦ ಸೆಕೆಂಡ್‌ಗಳು)

ಇದೇ ಸಂದರ್ಭದಲ್ಲಿ ಕೇಂದ್ರ ಸಚಿವ ಮನ್ಸುಕ್ ಮಾಂಡವೀಯ ಅವರು, ಸಿ.ಆರ್.ಎಸ್, ಫಂಡ್ ಮೂಲಕ ಮಂಡ್ಯ ಜಿಲ್ಲೆಯ ೩೮೮ ಮಂದಿ ವಿಕಲಚೇತನರಿಗೆ ಎಲೆಕ್ಟ್ರಾನಿಕ್ ವಾಹನ, ಸರ್ಕಾರಿ ಶಾಲೆ ಹಾಗೂ ಕಾಲೇಜುಗಳಿಗೆ ಉಚಿತ ಕಂಪ್ಯೂಟರ್ ಮತ್ತು ಲ್ಯಾಪ್‌ಟಾಪ್ ವಿತರಣೆ ಮಾಡಿದರು. ಕಾರ್ಯಕ್ರಮದಲ್ಲಿ ಕೇಂದ್ರ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ, ಆದಿಚುಂಚನಗಿರಿ ಮಠಾಧೀಶ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಸೇರಿದಂತೆ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

<><><><>

ರಾಜ್ಯದಲ್ಲಿ ಅಡುಗೆ ಅನಿಲ ಅಭಾವ ಆಗದಂತೆ ಗಮನ ಹರಿಸುವುದು ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿದ್ದು, ಇದನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಾಗಲಕೋಟೆಯಲ್ಲಿಂದು ತಿಳಿಸಿದ್ದಾರೆ. ಬಾಗಲಕೋಟೆ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಶಂಕುಸ್ಥಾಪನೆ ಮತ್ತು ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನಾ ಸಮಾರಂಭಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ರಾಜ್ಯದ ಆಹಾರ ಸಚಿವರನ್ನು ಒಳಗೊಂಡಂತೆ ಅಧಿಕಾರಿಗಳ ಸಭೆ ನಡೆಸಲಾಗಿದೆ. ಅಡುಗೆ ಅನಿಲ ಸಮಸ್ಯೆ ಉದ್ಭವಿಸದಂತೆ ಕ್ರಮ ವಹಿಸಬೇಕು ಎಂದು ಸೂಚಿಸಲಾಗಿದೆ. ಈ ಬಗ್ಗೆ ಕೇಂದ್ರ ಸರ್ಕಾರವು ಕೂಡ ವ್ಯತ್ಯಯವಾಗದಂತೆ ಪೂರೈಕೆ ಮಾಡುವುದು ಮುಖ್ಯವಾಗಿದೆ ಎಂದು ಹೇಳಿದ್ದಾರೆ. ಒಳ ಮೀಸಲಾತಿ ಸಂಬಂಧ ಇದೇ ತಿಂಗಳ ೧೭ ರಂದು ಬೆಂಗಳೂರಿನಲ್ಲಿ ಸಂಬಂಧಪಟ್ಟ ಸಚಿವರು, ಶಾಸಕರ ಸಭೆ ಕರೆಯಲಾಗಿದೆ. ಸಭೆಯಲ್ಲಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

<><><><>

ವಿಶ್ವವಿಖ್ಯಾತ ಮೇಲುಕೋಟೆ ಶ್ರೀ ಚೆಲುವನಾರಾಯಣಸ್ವಾಮಿ ವೈರಮುಡಿ ಬ್ರಹ್ಮೋತ್ಸವವು ಇದೇ ತಿಂಗಳ ೧೩ರಿಂದ ಏಪ್ರಿಲ್ ೪ ರವರೆಗೆ ನಡೆಯಲಿದೆ. ಈ ಉತ್ಸವದ ಪ್ರಮುಖ ಆಕರ್ಷಣೆಯಾದ ವೈರಮುಡಿ ಕಿರೀಟಧಾರಣೆಯು ಇದೇ ಮಾರ್ಚ್ ೧೮ರಂದು ಜರುಗಲಿದೆ. ವೈರಮುಡಿ ಉತ್ಸವದಲ್ಲಿ ಭಕ್ತಾಧಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ಕ್ರಮವಹಿಸಬೇಕೆಂದು ಕೃಷಿ ಮತ್ತು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೂಚಿಸಿದ್ದಾರೆ. ಇಂದು ಮಂಡ್ಯ ಜಿಲ್ಲೆಯ ಮೇಲುಕೋಟೆಯಲ್ಲಿ ನಡೆಯಲಿರುವ ವಿಶ್ವಪ್ರಸಿದ್ಧ ವೈರಮುಡಿ ಬ್ರಹ್ಮೋತ್ಸವದ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ವೈರಮುಡಿ ಉತ್ಸವದಲ್ಲಿ ಲಕ್ಷಾಂತರ ಭಕ್ತಾದಿಗಳು ಭಾಗವಹಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಭಕ್ತರಿಗೆ ಕುಡಿಯುವ ನೀರು ಸೇರಿ ಮೂಲಸೌಕರ್ಯ ಕಲ್ಪಿಸುವುದರ ಜೊತೆಗೆ ಯಾವುದೇ ಸಮಸ್ಯೆ ಆಗದಂತೆ ನೋಡಿಕೊಳ್ಳಲು

ಅಧಿಕಾರಿಗಳು ಈಗಿನಿಂದಲೇ ಕಾರ್ಯಪ್ರವೃತ್ತರಾಗಬೇಕು. ಪೊಲೀಸ್ ಇಲಾಖೆ ಕೂಡ ಅತ್ಯಂತ ಸಂಯಮದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣಯ್ಯ ಮಾತನಾಡಿ, ವೈರಮುಡಿ ಉತ್ಸವಕ್ಕೆ ಬರುವಂತ ಜನರಿಗೆ ಕುಡಿಯುವ ನೀರು ಇನ್ನಿತರ ಮೂಲಸೌಕರ್ಯಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದರು. ಸಭೆಯಲ್ಲಿದ್ದ ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ್, ಈಗಾಗಲೇ ವೈರಮುಡಿ ಉತ್ಸವ ಸಂಬಂಧ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಭಕ್ತಾದಿಗಳಿಗೆ ಅಗತ್ಯವಿರುವ ಕುಡಿಯುವ ನೀರು, ಶೌಚಾಲಯ, ವಾಹನ ನಿಲುಗಡೆ ಬಗ್ಗೆ ಗಮನಹರಿಸುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

<><><><>

ಉತ್ತರಕನ್ನಡ ಜಿಲ್ಲೆಯಲ್ಲಿ ಅನಧಿಕೃತವಾಗಿ ಗ್ಯಾಸ್ ಸಿಲಿಂಡರ್‌ಗಳ ಅಕ್ರಮ ದಾಸ್ತಾನು, ಸಾಗಾಣಿಕೆ, ರಿಫಿಲಿಂಗ್ ಪ್ರಕರಣಗಳು ಕಂಡು ಬಂದಲ್ಲಿ ಅಗತ್ಯ ವಸ್ತುಗಳ ಬೆಲೆ ನಿಯಂತ್ರಣ ಕಾಯ್ದೆಯಡಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ಕಾಳಸಂತೆಕೋರರಿಗೆ ಎಚ್ಚರಿಕೆ ನೀಡಿದ್ದಾರೆ. ಈ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿರುವ ಅವರು, ಈ ಸಂಬಂಧ ಆಯಾ ತಾಲೂಕಿನ ತಹಶೀಲ್ದಾರರವರಿಗೆ ಈ ಬಗ್ಗೆ ಕ್ರಮವಹಿಸಲು ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಕಾಳಸಂತೆಕೋರರ ವಿರುದ್ಧ ಕಠಿಣ ಕಾನೂನು ಕ್ರಮಗಳನ್ನು ಜರುಗಿಸಲು ಸಹ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಈಗಾಗಲೇ ತೈಲ ಕಂಪನಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳ ಲಭ್ಯತೆ ಬಗ್ಗೆ ಖಾತ್ರಿಪಡಿಸಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಯಾವುದೇ ಸಮಸ್ಯೆ ಇಲ್ಲ; ಹೀಗಾಗಿ, ಸಾರ್ವಜನಿಕರು ಅನಗತ್ಯ ಆತಂಕಕ್ಕೆ ಒಳಗಾಗದಂತೆ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಗ್ರಾಹಕರು ಆತಂಕದಲ್ಲಿ ತುರ್ತು ಮತ್ತು ಅನಗತ್ಯ ಬುಕಿಂಗ್ ಮಾಡದೆ, ಮಾರುಕಟ್ಟೆಯಲ್ಲಿ ಕೃತಕ ಬೇಡಿಕೆ ಸೃಷ್ಟಿಯಾಗದಂತೆ ಸಮತೋಲನ ಕಾಪಾಡಿಕೊಳ್ಳಬೇಕು. ಅಗತ್ಯ ಸೇವೆಗಳನ್ನು ಒದಗಿಸುವ ಸರ್ಕಾರಿ ಆಸ್ಪತ್ರೆಗಳು, ವಿದ್ಯಾರ್ಥಿನಿಲಯಗಳು, ಶಾಲಾ-ಕಾಲೇಜು, ಇತ್ಯಾದಿ ಸಂಸ್ಥೆಗಳಿಗೆ ಯಾವುದೇ ಅಡಚಣೆಯಾಗದಂತೆ ಎಲ್‌ಪಿಜಿ ಸೌಲಭ್ಯವನ್ನು ಒದಗಿಸುವಂತೆ ಸೂಚನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಅಭಯಾರಣ್ಯದಲ್ಲಿ ಕಾಡ್ಗಿಚ್ಚು ಉಂಟಾಗಿದ್ದು ಅಪಾರ ಪ್ರಮಾಣದ ಅರಣ್ಯ ನಾಶವಾಗಿದೆ. ಈ ಅಭಯಾರಣ್ಯದ ಮುತ್ತೋಡಿ ಅರಣ್ಯ ವ್ಯಾಪ್ತಿಯ ಹೊಸಖಾನ್, ಎಮ್ಮೆಹಳ್ಳಿ ಭಾಗಗಳಲ್ಲಿ ಬೆಂಕಿ ಕಾಣಿಸಿಕೊಂಡಿದ್ದು ಹೆಚ್ಚಿನ ಬಿಸಿಲು ಹಾಗೂ ಗಾಳಿಯಿಂದಾಗಿ ನೂರಾರು ಕಿಲೋ ಮೀಟರ್‌ವರೆಗೆ ಬೆಂಕಿ ವ್ಯಾಪಿಸಿದೆ.

ಕಾಡ್ಗಿಚ್ಚು ಉಂಟಾಗಿರುವ ಭದ್ರಾ ಅಭಯಾರಣ್ಯವು ಕಾಡಾನೆ, ಹುಲಿ, ಚಿರತೆ ಸೇರಿ ವನ್ಯಜೀವಿಗಳ, ನೂರಾರು ಪ್ರಬೇದದ ಪಕ್ಷಿ ಪ್ರಾಣಿಗಳ ವಾಸಸ್ಥಾನವಾಗಿದೆ ಜೊತೆಗೆ ಅಪರೂಪದ ಮರಗಳು, ಸಸ್ಯ ಸಂಕುಲಗಳನ್ನು ಒಳಗೊಂಡ ಅರಣ್ಯವಾಗಿದ್ದು ಬೆಂಕಿಯಿಂದಾಗಿ ಅಪಾರ ಪ್ರಮಾಣದಲ್ಲಿ ನಷ್ಟವಾಗಿರುವ ಸಾಧ್ಯತೆ ಇದೆ. ಸ್ಥಳಕ್ಕೆ ಅರಣ್ಯ ಇಲಾಕೆ ಸಿಬ್ಬಂದಿ ಕ್ಷಿಪ್ರ ಕಾರ್ಯ ಪಡೆಯೊಂದಿಗೆ ತೆರಳಿ ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿದ್ದಾರೆ.

<><><><>

ಮಹಿಳೆಯರು ತಮ್ಮ ಎಲ್ಲಾ ಹಕ್ಕುಗಳ ಬಗ್ಗೆ ಅರಿವು ಹೊಂದಿ ಸ್ವಾವಲಂಬಿಯಾಗಿ ಬದುಕಬೇಕು ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ ಹೇಳಿದ್ದಾರೆ. ಯಾದಗಿರಿಯಲ್ಲಿ ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆ ಕುರಿತು ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜಿಲ್ಲೆಯ ಪ್ರತಿಯೊಬ್ಬ ಮಹಿಳೆಗೆ ಕಾನೂನು ಮತ್ತು ಹಕ್ಕುಗಳ ಅರಿವು ಮೂಡಿಸುವ ಉದ್ದೇಶದಿಂದ ನಾರಿ ಸಖಿ ನ್ಯಾಯ ಅದಾಲತ್‌ಗಳ ಮೂಲಕ ತರಬೇತಿ ನೀಡಲಾಗುತ್ತಿದೆ. ಆಯ್ಕೆಯಾದ ನಾರಿ ಸಖಿಯರು ಗ್ರಾಮೀಣ ಭಾಗಗಳಲ್ಲಿ ಕಾರ್ಯನಿರ್ವಹಿಸಿ ಮಹಿಳಾ ಸಬಲೀಕರಣಕ್ಕೆ ಮುಂದಾಗಬೇಕು ಎಂದು ಹೇಳಿದರು.

<><><><>

ಕೋಲಾರ ಜಿಲ್ಲೆಯ ಕೆಜಿಎಫ್ ತಾಲ್ಲೂಕಿನ ಮಾರಿಕುಪ್ಪಂ ಬಳಿ ಕಲ್ಲು ಗಣಿಯಲ್ಲಿ ಸ್ಫೋಟಗೊಂಡು ತಮಿಳುನಾಡು ಮೂಲದ ಮೂವರು ಕಾರ್ಮಿಕರು ಗಾಯಗೊಂಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>